ವರ್ಷ	ಮಂಜೂರಾದ ಮನೆಗಳ ಸಂಖ್ಯೆ
1999-2000	25
2000-2001	0
2001-2002	10
2002-2003	15
ಒಟ್ಟು	50

ಶಿವಮೊಗ್ಗ ಗ್ರಾಮಾಂತರ ಪ್ರದೇಶಕ್ಕೆ ಸರ್ಕಾರಿ ಹಾಸ್ಟೆಲ್ ಮಂಜೂರಾತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 373(371)

ಸದಸ್ಯರ ಹೆಸರು : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ)

ಸಚಿವರ ಹೆಸರು ಮತ್ತು ಪದನಾಮ : ಶ್ರೀ ಕಾಗೋಡು ತಿಮ್ಮಪ್ಪ(ಸಮಾಜ ಕಲ್ಯಾಣ ಸಚಿವರು)

ಪ್ರಶ್ನೆ

ಅ. ಶಿವಮೊಗ್ಗ ಗ್ರಾಮಾಂತರ ಪ್ರದೇಶಕ್ಕೆ ಸರ್ಕಾರದಿಂದ ಎಷ್ಟು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪರ್ಗದ ಹಾಸ್ಟೆಲ್‌ಗಳನ್ನು ಮಂಜೂರು ಮಾಡಲಾಗಿದೆ? (ವಿವರ ನೀಡುವುದು)

ಉತ್ತರ

ಅ. ಶಿವಮೊಗ್ಗ ಗ್ರಾಮಾಂತರ ಪ್ರದೇಶಕ್ಕೆ ಸರ್ಕಾರದಿಂದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಹೊಸನಗರ ತಾಲ್ಲೂಕಿನ ರಿಪ್ಪನ್‌ಪೇಟೆಯಲ್ಲಿ ಒಂದು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಹಾಗೂ ಭದ್ರಾವತಿ ತಾಲ್ಲೂಕಿನ ಕಲ್ಲಿಹಾಳ್ ಸರ್ಕಲ್‌ಗೆ ಒಂದು ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ, ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಭದ್ರಾವತಿ ತಾಲ್ಲೂಕಿನ ಅಂತರಗಂಗೆಯಲ್ಲಿ ಒಂದು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಹಾಗೂ ಸಾಗರ ತಾಲ್ಲೂಕಿನ ತಾಳಗುಪ್ಪೆಯಲ್ಲಿ ಒಂದು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳಿಗೆ ಮಂಜೂರಾತಿ ನೀಡಲಾಗಿದೆ.

ಶಿವಮೊಗ್ಗ ನಗರದ ಅಂಬೇಡ್ಕರ್ ಭವನದ ಕಾಮಗಾರಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 374(372)

ಸದಸ್ಯರ ಹೆಸರು : ಶ್ರೀ ಹೆಚ್.ಎಂ.ಚಂದ್ರಶೇಖರಪ್ಪ(ಶಿವಮೊಗ್ಗ)

ಸಚಿವರ ಹೆಸರು ಮತ್ತು ಪದನಾಮ : ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು)

ಪ್ರಶ್ನೆ

1) ಶಿವಮೊಗ್ಗ ನಗರದ ಮಹಾತ್ಮ ಗಾಂಧಿ ಉದ್ಯಾನವನದಲ್ಲಿ ನಿರ್ಮಾಣಗೊಳ್ಳುತ್ತಿರುವ ಅಂಬೇಡ್ಕರ್ ಭವನದ ಅಂದಾಜು ವೆಚ್ಚ ಎಷ್ಟು?

2) ಇದುವರೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು?

3) ಕಾಮಗಾರಿಯು ಕುಂಠಿತಗೊಂಡಿರಲು ಕಾರಣವೇನು?

4) ಕಾಮಗಾರಿಯು ಪೂರ್ಣಗೊಳ್ಳಲು ಬೇಕಾಗುವ ಅನುದಾನವೆಷ್ಟು? (ವಿವರ ನೀಡುವುದು)?

ಉತ್ತರ

1) ಅಂಬೇಡ್ಕರ್ ಭವನದ ಯೋಜನಾ ಅಂದಾಜು ಮೊತ್ತ ರೂ.67.70 ಲಕ್ಷಗಳಾಗಿರುತ್ತದೆ.

2) ಸರ್ಕಾರದಿಂದ ಮಂಜೂರಾಗಿರುವ ರೂ.5.00 ಲಕ್ಷಗಳು ಈಗಾಗಲೇ ಬಿಡುಗಡೆಯಾಗಿರುತ್ತದೆ. ಉಳಿದ ರೂ.52.05 ಲಕ್ಷಗಳನ್ನು ವಿವಿಧ ಮೂಲಗಳಿಂದ ಸ್ಥಳೀಯವಾಗಿ ಸಂಗ್ರಹಿಸಲಾಗಿದೆ.

3) ಕೆಲವು ತಾಂತ್ರಿಕ ನ್ಯೂನತೆಗಳಿಂದ ಕಾಮಗಾರಿಯು ಸ್ಥಗಿತಗೊಂಡಿದ್ದು ನ್ಯೂನತೆಗಳನ್ನು ಸರಿಪಡಿಸಿ ಕಾಮಗಾರಿಯನ್ನು ಮುಂದುವರೆಸಲು ಕ್ರಮ ಕೈಗೊಳ್ಳಲಾಗುವುದು.

4) ಭವನದ ಕಾಮಗಾರಿಯನ್ನು ಪೂರ್ಣಗೊಳಿಸಲು ಇನ್ನೂ 10.65 ಲಕ್ಷಗಳು ಅವಶ್ಯಕತೆಯಿದ್ದು ಇದನ್ನು ಸ್ಥಳೀಯ ಮೂಲಗಳಿಂದ ಸಂಗ್ರಹಿಸಬೇಕಾಗಿದೆ.